**All India Radio: Bangalore**
**National Bulletin In Kannada**
**05.04.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.04.2026  7.35 am**

**<>><><*><><<>**

ಮುಖ್ಯಾಂಶಗಳು

**೧. ಪಂಚರಾಜ್ಯ ವಿಧಾನಸಭಾ ಚುನಾವಣೆ; ಕೂಚ್ ಬಿಹಾರ್‌ನಲ್ಲಿಂದು ಹಿರಿಯ ಬಿಜೆಪಿ ನಾಯಕ, ಪ್ರಧಾನಿ ನರೇಂದ್ರ ಮೋದಿ ಚುನಾವಣಾ ಪ್ರಚಾರ**

**೨. ಕೇರಳದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಪ್ರಚಾರ ಸಭೆಯಲ್ಲಿ ಭಾಗಿ**

**೩. ಪಶ್ಚಿಮ ಏಷ್ಯಾ ಸಂಘರ್ಷ; ಇರಾನ್‌ಗೆ ಹರ್ಮುಜ್ ಜಲಸಂಧಿ ತೆರೆಯಲು ೪೮ ಗಂಟೆಗಳ ಗಡುವು ವಿಧಿಸಿದ ಅಮೆರಿಕ**

**೪. ವಿಶ್ವ ಪ್ಯಾರಾ ಆರ್ಚರಿ ಟೂರ್ನಿ; ಕಾಂಪೌಂಡ್ ಮಹಿಳಾ ವಿಭಾಗದಲ್ಲಿ ಭಾರತದ ಪಾಯಲ್‌ನಾಗ್‌ಗೆ ಚಿನ್ನದ ಪದಕ**

**೫. ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟನ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್‌ಗೆ ೬ ರನ್‌ಗಳ ಜಯ**

**<>><><*><><<>**

ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಪಶ್ಚಿಮ ಬಂಗಾಳದ ಕೂಚ್ ಬೆಹಾರ್‌ಗೆ ಚುನಾವಣಾ ಪ್ರಚಾರಕ್ಕಾಗಿ ಭೇಟಿ ನೀಡಲಿದ್ದಾರೆ. ಕೂಚ್ ಬೆಹಾರ್ ರಸಮೇಳ ಮೈದಾನದಲ್ಲಿ, ಅವರು ಕೂಚ್ ಬೆಹಾರ್ ಜಿಲ್ಲೆಯ ಎಂಟು ಸ್ಥಾನಗಳು ಮತ್ತು ಅಲಿಪುರ್ದೂರ್ ಜಿಲ್ಲೆಯ ಐದು ಸ್ಥಾನಗಳಲ್ಲಿ ಸ್ಪರ್ಧಿಸುತ್ತಿರುವ ಬಿಜೆಪಿ ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ. ಪ್ರಧಾನ ಮಂತ್ರಿಯವರ ರ್‍ಯಾಲಿಗೆ ಮುಂಚಿತವಾಗಿ, ರಾಜ್ಯ ಬಿಜೆಪಿ ಅಧ್ಯಕ್ಷ ಮತ್ತು ರಾಜ್ಯಸಭಾ ಸಂಸದ ಶಮಿಕ್ ಭಟ್ಟಾಚಾರ್ಯ, ಕೂಚ್ ಬೆಹಾರ್ ನಿವಾಸಿಗಳಿಗೆ ಪ್ರಧಾನಿಯವರ ಸಾರ್ವಜನಿಕ ಸಭೆಯನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದಾರೆ. ನಿನ್ನೆ ಪ್ರಧಾನಿ ಕೇರಳಂನ ತಿರುವಲ್ಲಾದಲ್ಲಿ ಬೃಹತ್ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಅವರು, ಮಹಿಳೆಯರಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಗೆ ಶೇಕಡಾ ೩೩ ರಷ್ಟು ಮೀಸಲಾತಿ ಕಲ್ಪಿಸುವ ೨೦೨೩ರ ಕಾಯ್ದೆಯನ್ನು ೨೦೨೯ರಿಂದಲೇ ಜಾರಿಗೆ ತರುವ ನಿಟ್ಟಿನಲ್ಲಿ ಸಂಸತ್ತಿನ

ಬಜೆಟ್ ಅಧಿವೇಶನವನ್ನು ಮೂರು ದಿನಗಳ ಕಾಲ ವಿಸ್ತರಿಸಲಾಗಿದೆ. ಇದೇ ೧೬, ೧೭, ೧೮ ರಂದು ಸಂಸತ್ ಸಮಾವೇಶಗೊಳ್ಳಲಿದೆ ಎಂದು ತಿಳಿಸಿದ್ದಾರೆ. ದಕ್ಷಿಣ ಭಾರತದ ರಾಜ್ಯಗಳಾದ ಕೇರಳ, ತಮಿಳುನಾಡು, ಕರ್ನಾಟಕ, ಗೋವಾ, ತೆಲಂಗಾಣ ಸೇರಿದಂತೆ ಯಾವುದೇ ರಾಜ್ಯದ ಲೋಕಸಭಾ ಸ್ಥಾನಗಳ ಸಂಖ್ಯೆ ಕಡಿತಗೊಳ್ಳದಂತೆ ಸರ್ಕಾರ ಕಾನೂನು ಬದ್ಧವಾಗಿ ಖಚಿತಪಡಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದರು.

**<>><><*><><<>**

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗೆ ಭಾರತೀಯ ಜನತಾ ಪಕ್ಷ- ಬಿಜೆಪಿ ತನ್ನ ಐದು ಅಭ್ಯರ್ಥಿಗಳ ಐದನೇ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಹೊಸ ಪಟ್ಟಿಯ ಪ್ರಕಾರ, ಕಲ್ಯಾಣಿ ಕ್ಷೇತ್ರದಿಂದ ಅನುಪಮ್ ಬಿಸ್ವಾಸ್, ಕೃಷ್ಣನಗರ ಉತ್ತರದಿಂದ ತಾರಕ್‌ನಾಥ್ ಚಟರ್ಜಿ, ದಮ್‌ದಮ್ ಉತ್ತರ ಕ್ಷೇತ್ರದಿಂದ ಸೌರವ್ ಸಿಖ್‌ದರ್, ಮಧ್ಯಮ ಗ್ರಾಮದಿಂದ ಅನಿಂದ್ಯ ರಾಜು ಬ್ಯಾನರ್ಜಿ ಮತ್ತು ಉಲುಬೇರಿಯಾ ಪೂರ್ಬಾ ಕ್ಷೇತ್ರದಿಂದ ರುದ್ರಪ್ರಸಾದ್ ಬ್ಯಾನರ್ಜಿ ಸ್ಪರ್ಧಿಸಲಿದ್ದಾರೆ. ಇದರ ಜೊತೆಗೆ ಹಳೆಯ ಪಟ್ಟಿಯಲ್ಲಿದ್ದ ಕೆಲವು ಹೆಸರುಗಳನ್ನು ಪಕ್ಷ ಪರಿಷ್ಕರಿಸಿದೆ. ಮತ್ತೊಂದೆಡೆ ಪಶ್ಚಿಮ ಬಂಗಾಳದ ಪಾಣಿಹಟಿ ವಿಧಾನಸಭಾ ಕ್ಷೇತ್ರದ ಸೆಕ್ಟರ್ ಅಸಿಸ್ಟೆಂಟ್ ಅತನು ಚಕ್ರವರ್ತಿ ಅವರನ್ನು ಚುನಾವಣಾ ಆಯೋಗ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ವಜಾಗೊಳಿಸಿದೆ. ನಿರ್ದಿಷ್ಟ ರಾಜಕೀಯ ಚಟುವಟಿಕೆಗಳಲ್ಲಿ ಭಾಗಿಯಾದ ಮತ್ತು ಕರ್ತವ್ಯ ಲೋಪ ಎಸಗಿದ ಆರೋಪದ ಮೇಲೆ ಅವರಿಗೆ ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ. ಇದೇ ವೇಳೆ, ಮುರ್ಷಿದಾಬಾದ್ ಜಿಲ್ಲೆಯ ಬಹರಂಪುರ್ ಪೊಲೀಸ್ ಇನ್ಸ್‌ಪೆಕ್ಟರ್ ವಿರುದ್ಧವೂ ಶಿಸ್ತುಕ್ರಮ ಕೈಗೊಳ್ಳಲಾಗಿದೆ. ಹಿರಿಯ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಅವರ ನಾಮಪತ್ರ ಸಲ್ಲಿಕೆ ಮತ್ತು ಚುನಾವಣಾ ಪ್ರಚಾರದ ವೇಳೆ ಕಾನೂನು ಬಾಹಿರವಾಗಿ ಅಡ್ಡಿಪಡಿಸಿದ ದೂರಿನ ಹಿನ್ನೆಲೆಯಲ್ಲಿ ಈ ಕ್ರಮ ಜರುಗಿಸಲಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ತೃಣಮೂಲ ಕಾಂಗ್ರೆಸ್‌ನ ನಾಲ್ವರ ನಾಯಕರ ವಿರುದ್ಧವೂ ಆಯೋಗ ತನಿಖೆ ಆರಂಭಿಸಿದೆ.

**<>><><*><><<>**

ವಿಧಾನಸಭೆ ಚುನಾವಣೆ ನಡೆಯುತ್ತಿರುವ ಕ್ಷೇತ್ರಗಳಲ್ಲಿನ ಅಭ್ಯರ್ಥಿಗಳ ವಿವರಗಳನ್ನು ಮತದಾರರು ಇಸಿಐಎನ್‌ಇಟಿ ವೇದಿಕೆ ಮೂಲಕ ಪಡೆಯಬಹುದಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಅಭ್ಯರ್ಥಿಗಳು ಸಲ್ಲಿಸಿದ ಸಂಪೂರ್ಣ ಅಫಿಡವಿಟ್‌ಗಳನ್ನು ಕೂಡ ಡೌನ್‌ಲೋಡ್ ಮಾಡಬಹುದಾಗಿದೆ ಎಂದು ಆಯೋಗ ತಿಳಿಸಿದೆ. ಚುನಾವಣಾ ಆಯೋಗ ಪಶ್ಚಿಮ ಬಂಗಾಳದಲ್ಲಿ ೪ ಸಾವಿರದ ೬೬೦ ಪೂರಕ ಮತಗಟ್ಟೆಗಳನ್ನು ಸ್ಥಾಪಿಸಲು ಅನುಮೋದನೆ ನೀಡಿದೆ. ಮತದಾರರಿಗೆ

ಅನುಕೂಲವಾಗುವಂತೆ ೧೨೧ ಮತಗಟ್ಟೆಗಳನ್ನು ಸ್ಥಳಾಂತರಿಸಲು ಕೂಡ ಆಯೋಗ ಒಪ್ಪಿಗೆ ನೀಡಿದೆ.

**<>><><*><><<>**

ಕೇರಳಂನ ೧೪೦ ವಿಧಾನಸಭಾ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ಅಂತಿಮ ಘಟ್ಟ ತಲುಪುತ್ತಿದ್ದು, ಮತದಾರರನ್ನು ಸೆಳೆಯಲು ಅಭ್ಯರ್ಥಿಗಳು ಮತ್ತು ವಿವಿಧ ರಾಜಕೀಯ ಪಕ್ಷಗಳು ಸರ್ವ ಪ್ರಯತ್ನ ನಡೆಸುತ್ತಿವೆ. ಪ್ರಚಾರದ ಗಡುವು ಕೊನೆಗೊಳ್ಳಲು ಕೆಲದಿನಗಳಷ್ಟೇ ಬಾಕಿ ಇರುವ ಹಿನ್ನೆಲೆಯಲ್ಲಿ ಈ ವಾರಾಂತ್ಯದಲ್ಲಿ ಅಭ್ಯರ್ಥಿಗಳು ಮನೆಮನೆಗೆ ತೆರಳಿ ಮತಯಾಚಿಸುವ ಮತ್ತು ಸ್ಥಳೀಯರೊಂದಿಗೆ ನೇರ ಸಂವಾದ ನಡೆಸುವ ಕಾರ್ಯಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ. ಹಿರಿಯ ಬಿಜೆಪಿ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಬೇಪೂರ್‌ನಲ್ಲಿ ರೋಡ್ ಶೋ ಮತ್ತು ಕಾಟ್ಟಾಕಡಾದಲ್ಲಿ ಬೃಹತ್ ಸಾರ್ವಜನಿಕ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಮೊತ್ತೊಂದೆಡೆ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಪೀರಾಮೇಡು ಮತ್ತು ಕೊಟ್ಟಾರಕ್ಕರ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸಿಪಿಐಎಂ ಪ್ರಧಾನ ಕಾರ್ಯದರ್ಶಿ ಎಂಎ ಬೇಬಿ ವಾಮನ ಪುರಂ ಮತ್ತು ವರ್ಕಲಾ ಕ್ಷೇತ್ರಗಳಲ್ಲಿ ಎಲ್‌ಡಿಎಫ್ ಪರ ಮತಯಾಚಿಸಲಿದ್ದಾರೆ. ಇದೇ ೯ ರಂದು ನಡೆಯಲಿರುವ ಮತದಾನಕ್ಕೂ ಮುನ್ನ ಎಲ್ಲಾ ರಾಜಕೀಯ ಪಕ್ಷಗಳು ಅಂತಿಮ ಹಂತದ ಕಸರತ್ತು ನಡೆಸಿವೆ.

**<>><><*><><<>**

ಹೋರ್ಮುಜ್ ಜಲಸಂಧಿಯನ್ನು ಕೂಡಲೇ ತೆರೆಯುವಂತೆ ಇರಾನ್‌ಗೆ ಅಮೆರಿಕ ೪೮ ಗಂಟೆಗಳ ಗಡುವು ವಿಧಿಸಿದೆ. ಒಂದು ವೇಳೆ ಇರಾನ್, ಜಲಸಂಧಿಯನ್ನು ತೆರೆಯದಿದ್ದರೆ, ಅಲ್ಲಿನ ಇಂಧನ ಮೂಲಸೌಕರ್ಯಗಳ ಮೇಲೆ ತೀವ್ರ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಮಾತ್ರವಲ್ಲ ರಾಜತಾಂತ್ರಿಕ ಸಂಧಾನದ ಮಾತುಕತೆಯನ್ನು ಸಹ ಸ್ವಾಗತಿಸಿರುವ ಟ್ರಂಪ್ ಹತ್ತು ದಿನಗಳೊಳಗಾಗಿ ಶರಣಾಗುವಂತೆ ಇರಾನಗೆ ಸೂಚಿಸಿದ್ದಾರೆ.

**<>><><*><><<>**

ಇರಾನ್‌ನ ಹಲವು ಸೇನಾನಾಯಕರನ್ನು ಹತ್ಯೆಗೈದಿರುವುದಾಗಿ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತೆಹರಾನ್ ಮೇಲಿನ ಬೃಹತ್ ದಾಳಿಯ ವೀಡಿಯೋ ಒಂದನ್ನು ಹಂಚಿಕೊಂಡಿರುವ ಟ್ರಂಪ್, ಇರಾನಿನ ಪ್ರಮುಖ ಮಿಲಿಟರಿ ಅಧಿಕಾರಿಗಳನ್ನು ಸದೆಬಡಿದಿರುವುದಾಗಿ ತಿಳಿಸಿದ್ದಾರೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿ ಸಂಭವಿಸುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ಇರಾನ್‌ನಲ್ಲಿ ಸಿಲುಕಿಕೊಂಡಿದ್ದ ಒಟ್ಟು ೩೪೫ ಭಾರತೀಯ ಮೀನುಗಾರರನ್ನು ಯಶಸ್ವಿಯಾಗಿ ರಕ್ಷಿಸಲಾಗಿದ್ದು, ಅವರು ನಿನ್ನೆ ಅರ್ಮೇನಿಯಾ ಮಾರ್ಗವಾಗಿ ಚೆನ್ನೈಗೆ ಸುರಕ್ಷಿತವಾಗಿ ಬಂದು ತಲುಪಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪ್ರಕಾರ, ಸಂಘರ್ಷ ಪೀಡಿತ ಪ್ರದೇಶಗಳಲ್ಲಿರುವ ಭಾರತೀಯ ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಭಾರತ ಸರ್ಕಾರವು ನಡೆಸುತ್ತಿರುವ ನಿರಂತರ ಪ್ರಯತ್ನದ ಭಾಗವಾಗಿ ಈ ಮೀನುಗಾರರನ್ನು ತಾಯ್ನಾಡಿಗೆ ಕರೆತರಲಾಗಿದೆ.ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರು ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿದ್ದು, ಮೀನುಗಾರರ ಸ್ಥಳಾಂತರ ಪ್ರಕ್ರಿಯೆಗೆ ಅಗತ್ಯ ಸಹಕಾರ ನೀಡಿದ ಅರ್ಮೇನಿಯಾ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ.  ಸಂಘರ್ಷದ ನಡುವೆಯೂ ಭಾರತೀಯರು ಇರಾನ್‌ನಿಂದ ಭಾರತಕ್ಕೆ ಪ್ರಯಾಣಿಸಲು ಅನುವು ಮಾಡಿಕೊಟ್ಟಿದ್ದಕ್ಕಾಗಿ ಅರ್ಮೇನಿಯಾದ ವಿದೇಶಾಂಗ ಸಚಿವ ಅರಾರತ್ ಮಿರ್ಜೋಯನ್ ಅವರಿಗೆ ಜೈಶಂಕರ್ ಅವರು ವಿಶೇಷ ಧನ್ಯವಾದ ಅರ್ಪಿಸಿದ್ದಾರೆ.

**<><><*><><<>**

ದೇಶದಲ್ಲಿ ವರ್ಷವಿಡೀ ಪ್ರತಿದಿನ ೨೫ ಸಾವಿರ ರೈಲುಗಳು ಸಂಚಾರ ಸೌಲಭ್ಯ ಒದಗಿಸುತ್ತಿದ್ದು, ಸಂಪರ್ಕ ಕ್ಷೇತ್ರದಲ್ಲಿ ಬದಲಾವಣೆ ತಂದಿವೆ ಎಂದು ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಭಾರತೀಯ ರೈಲ್ವೆ, ಕಳೆದ ಹಣಕಾಸು ವರ್ಷದಲ್ಲಿ ಮಾಡಿರುವ ರೂಪಾಂತರ ಪ್ರಗತಿಯನ್ನು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿವರಿಸಿರುವ ಸಚಿವರು, ೨೦೨೫-೨೬ ನೇ ಸಾಲಿನ ಒಂದು ಸಾವಿರದ ೬೭೦ ಮಿಲಿಯನ್ ಟನ್ ಸರಕು ಸಾಗಾಟದ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ ಎಂದಿದ್ದಾರೆ. ವಂದೇ ಭಾರತ್ ಸೇವೆ ವಿಸ್ತಾರ, ಸುರಕ್ಷತಾ ಕ್ರಮಗಳಲ್ಲಿ ಸುಧಾರಣೆ, ನಿಲ್ದಾಣಗಳ ಬಲವರ್ಧನೆ, ಮೂಲಸೌಕರ್ಯ ಹೆಚ್ಚಳ-ಮೊದಲಾದವುಗಳ ಬಗ್ಗೆ ಸಚಿವರು ಪ್ರಸ್ತಾಪಿಸಿದ್ದಾರೆ. ಭಾರತೀಯ ರೈಲ್ವೆ ದೇಶೀಯವಾಗಿ ೧ ಸಾವಿರದ ೫೦೦ ಲೋಕೋ ಮೋಟಿವ್ಸ್ ಹಾಗೂ ೬ ಸಾವಿರದ ೬೦೦ಕ್ಕೂ ಅಧಿಕ ಎಲ್‌ಎಚ್‌ಬಿ ಕೋಚ್‌ಗಳನ್ನು ತಯಾರಿಸಿದೆ. ಇವುಗಳಲ್ಲಿ 'ಕವಚ್' ಸ್ವಯಂ ಚಾಲಿತ ರೈಲು ಸಂರಕ್ಷಣಾ ವ್ಯವಸ್ಥೆ ಅಲವಡಿಸಲಾಗಿದೆ. 'ಅಮೃತ ಭಾರತ್' ನಿಲ್ದಾಣ ಯೋಜನೆಯಡಿ ೧೧೯ ನಿಲ್ದಾಣಗಳನ್ನು ಪುನರ್ ಅಭಿವೃದ್ಧಿಗೊಳಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

**<><><*><><<>**

ಬ್ಯಾಂಕಾಕ್‌ನಲ್ಲಿ ನಡೆದ ವಿಶ್ವ ಪ್ಯಾರಾ ಆರ್ಚರಿ ಸರಣಿಯಲ್ಲಿ ಭಾರತದ ೧೮ ವರ್ಷದ ಪಾಯಲ್ ನಾಗ್ ಅವರು ವಿಶ್ವದ ಅಗ್ರ ಶ್ರೇಯಾಂಕಿತ ಆಟಗಾರ್ತಿ ಶೀತಲ್ ದೇವಿ ಅವರನ್ನು ೧೩೯-೧೩೬

ಅಂತರದಿಂದ ಸೋಲಿಸಿ ಚಿನ್ನದ ಪದಕ ಗೆದ್ದಿದ್ದಾರೆ. ಈ ಸಾಧನೆಯೊಂದಿಗೆ ಭಾರತವು ಸರಣಿಯಲ್ಲಿ ೭ ಚಿನ್ನ ಸೇರಿದಂತೆ ಒಟ್ಟು ೧೬ ಪದಕಗಳನ್ನು ತನ್ನದಾಗಿಸಿಕೊಂಡಿದೆ. ಇತರ ಪ್ರಮುಖ ಪಂದ್ಯಗಳಲ್ಲಿ, ಪುರುಷರ ಕಾಂಪೌಂಡ್ ವಿಭಾಗದಲ್ಲಿ ತೋಮಸ್ ಕುಮಾರ್ ಮತ್ತು ಮಹಿಳೆಯರ ರಿಕರ್ವ್ ವಿಭಾಗದಲ್ಲಿ ಭಾವನಾ ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ. ತಾರಾ ಬಿಲ್ಲುಗಾರ ಹರ್ವಿಂದರ್ ಸಿಂಗ್ ಮತ್ತು ಸ್ವಾತಿ ಚೌಧರಿ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟರೆ, ಶ್ಯಾಮ್ ಸುಂದರ್ ಸ್ವಾಮಿ ಕಂಚಿನ ಪದಕ ಗೆದ್ದಿದ್ದಾರೆ. ಅಂತಿಮವಾಗಿ ಭಾರತವು ೭ ಚಿನ್ನ, ೫ ಬೆಳ್ಳಿ ಮತ್ತು ೪ ಕಂಚಿನ ಪದಕಗಳೊಂದಿಗೆ ಅಭಿಯಾನ ಮುಕ್ತಾಯಗೊಳಿಸಿದೆ.

**<>><><*><><<>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೊನೆಯ ಓವರ್‌ನ ರೋಮಾಂಚಕ ಸೆಣಸಾಟದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಗುಜರಾತ್ ಟೈಟಾನ್ಸ್ ತಂಡವನ್ನು ೬ ರನ್‌ಗಳಿಂದ ಮಣಿಸಿತು. ರಾಜಸ್ಥಾನ್ ರಾಯಲ್ಸ್ ನೀಡಿದ್ದ ೨೧೧ ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಗುಜರಾತ್ ಟೈಟಾನ್ಸ್ ತಂಡ, ೬ ರನ್‌ಗಳಿಂದ ಮಣಿದು, ಈ ಮೂಲಕ ಪಂದ್ಯಾವಳಿಯಲ್ಲಿ ಸತತ ಎರಡನೇ ಸೋಲನುಭವಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೦ ರನ್ ಗಳಿಸಿತು. ಇದಕ್ಕೂ ಮುನ್ನ ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ, ಡೆಲ್ಲಿ ಕ್ಯಾಪಿಟಲ್ಸ್ ತಂಡವು ಮುಂಬೈ ಇಂಡಿಯನ್ಸ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿತು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**